DBCDC

## ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ ನಿಯಮಿತ

ದೇವರಾಜ ಅರಸು ಭವನ, 4ನೇ ಮಹಡಿ, ನಂ 16ಡಿ, ಮಿಲ್ಲರ್ ಟ್ಯಾಂಕ್ ಬೆಡ್ ಏರಿಯಾ, ವಸಂತನಗರ, ಬೆಂಗಳೂರು- 52.

ಸಂಖ್ಯೆ: ದೇಹಿನಿ/ಸ/ಅ.ಮ/ಸಿ.ಆರ್-01/2022-23

ದಿನಾಂಕ:13-07-2022

# ಪ್ರಕಟಣೆ

**ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದಿಂದ 2022-23ನೇ ಸಾಲಿಗೆ ಸ್ವಾತಂತ್ರ್ಯ ಅಮೃತ ಮಹೋತ್ಸವ ಮುನ್ನಡೆ ಯೋಜನೆಯಲ್ಲಿ ಅರ್ಜಿ ಆಹ್ವಾನಿಸಲಾಗಿದೆ.**

***ಕೌಶಲ್ಯ ಕರ್ನಾಟಕ ತಂತ್ರಾಂಶದ ಮುಖಾಂತರ ಆನ್‌ಲೈನ್ ಅರ್ಜಿ ಸ್ವೀಕೃತಿ***

## ❖ ಸ್ವಾತಂತ್ರ್ಯ ಅಮೃತ ಮಹೋತ್ಸವ ಮುನ್ನಡೆ ಯೋಜನೆ

ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ, ಕರ್ನಾಟಕ ಅಲೆಮಾರಿ ಮತ್ತು ಅರೆ ಅಲೆಮಾರಿ ಅಭಿವೃದ್ಧಿ ನಿಗಮ, ಕರ್ನಾಟಕ ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮ, ಕರ್ನಾಟಕ ಸವಿತಾ ಸಮಾಜ ಅಭಿವೃದ್ಧಿ ನಿಗಮ, ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮ, ಕರ್ನಾಟಕ ಉಪ್ಪಾರ ಅಭಿವೃದ್ಧಿ ನಿಗಮ ಹಾಗೂ ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮಗಳ ವ್ಯಾಪ್ತಿಗೆ ಒಳಪಡುವ (ಒಕ್ಕಲಿಗ, ಲಿಂಗಾಯತ, ಕಾಡುಗೊಲ್ಲ, ಹಟ್ಟಿಗೊಲ್ಲ ಮತ್ತು ಮರಾಠ ನಿಗಮಗಳಡಿಯಲ್ಲಿ ಬರುವ ಸಮುದಾಯಗಳನ್ನು ಹೊರತುಪಡಿಸಿ) ಹಿಂದುಳಿದ ವರ್ಗಗಳ ಯುವ ಜನರಿಗೆ ಕೌಶಲ್ಯ ಅಭಿವೃದ್ಧಿಪಡಿಸಿ ಉದ್ಯೋಗಮುಖಿಯನ್ನಾಗಿಸಲು ಸರ್ಕಾರದ ಸಂಸ್ಥೆಗಳಾದ ITIs, GTTC, KGTTI ರಲ್ಲಿ **ಅಲ್ಪಾವಧಿ ಕೋರ್ಸುಗಳ ಮೂಲಕ ಕೌಶಲ್ಯ ತರಬೇತಿ** ನೀಡಲು **ಕೌಶಲ್ಯ ಕರ್ನಾಟಕ ತಂತ್ರಾಂಶದ** ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

**ಅರ್ಹತೆಗಳು:** 10ನೇತರಗತಿ/ದ್ವಿತೀಯಪಿ.ಯು.ಸಿ./ಡಿಪ್ಲೋಮ/ಪದವಿ/ಇಂಜಿನಿಯರಿಂಗ್ ವ್ಯಾಸಂಗವನ್ನು ಪೂರ್ಣಗೊಳಿಸಿರಬೇಕು, ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಜಾತಿ ಪಟ್ಟಿಯಲ್ಲಿ ನಮೂದಿಸಿದ ಮೇಲ್ಕಂಡ ನಿಗಮಗಳ ವ್ಯಾಪ್ತಿಗೆ ಒಳಪಡುವ ಜಾತಿಗಳಿಗೆ ಸೇರಿದವರಾಗಿರಬೇಕು. **ಅರ್ಜಿದಾರರ ವಯಸ್ಸು 18 ರಿಂದ 25 ವರ್ಷಗಳ ಒಳಗಿರಬೇಕು. ಪ್ರವರ್ಗ-1ಕ್ಕೆ ಸೇರಿದ ಅಭ್ಯರ್ಥಿಗಳಿಗೆ ಕುಟುಂಬದ ವಾರ್ಷಿಕ ವರಮಾನ/ಆದಾಯ ಮಿತಿ ಇರುವುದಿಲ್ಲ. ಪ್ರವರ್ಗ-2ಎ,3ಎ ಮತ್ತು 3ಬಿಗೆ ಸೇರಿದ ಅರ್ಜಿದಾರರ ಕುಟುಂಬದ ವಾರ್ಷಿಕ ವರಮಾನ/ಆದಾಯ ರೂ.8.00 ಲಕ್ಷಗಳಿಗಿಂತ ಕಡಿಮೆ ಇರಬೇಕು.**

ಅರ್ಜಿದಾರರು **https://www.kaushalkar.com/** ಜಾಲತಾಣದೊಂದಿಗೆ ಅರ್ಜಿಯನ್ನು ಸಲ್ಲಿಸಬಹುದು ಅಥವಾ ಮೇಲ್ಕಂಡ ನಿಗಮಗಳ ಈ ಕೆಳಕಂಡ ವೆಬ್‌ಸೈಟ್‌ಗಳನ್ನು ಸಂಪರ್ಕಿಸುವುದು.

**https://www.dbcdc.karnataka.gov.in**, ( ಡಿ.ದೇವರಾಜ ಅರಸು ಅಭಿವೃದ್ಧಿ ನಿಗಮ)

**https://kaad.karnataka.gov.in**, ( ಅಲೆಮಾರಿ ಅಭಿವೃದ್ಧಿ ನಿಗಮ)

**https://kssd.karnataka.gov.in**, ( ಸವಿತಾ ಸಮಾಜ ಅಭಿವೃದ್ಧಿ ನಿಗಮ

**https://kmmd.karnataka.gov.in** ( ಮಡಿವಾಳ ಅಭಿವೃದ್ಧಿ ನಿಗಮ)

**https://uppardevelopment.karnataka.gov.in** ( ಉಪ್ಪಾರ ಅಭಿವೃದ್ಧಿ ನಿಗಮ )

**https://kvcdcl.karnataka.gov.in** (ವಿಶ್ವಕರ್ಮ ಅಭಿವೃದ್ಧಿ ನಿಗಮ)

**https://ambigaradevelopment.karnataka.gov.in** (ನಿಜಶರಣ ಅಂಬಿಗರ ಚೌಡಯ್ಯ ಅಭಿವೃದ್ಧಿ ನಿಗಮ)

ಹೆಚ್ಚಿನ ಮಾಹಿತಿಗಾಗಿ ನಿಗಮದ ಕೇಂದ್ರ ಕಛೇರಿಯ ದೂರವಾಣಿ/ಸಹಾಯವಾಣಿ **ಸಂಖ್ಯೆ: 080-22374832, 9606066389 ಮತ್ತು 8824300400** ಅಥವಾ ಆಯಾ ಜಿಲ್ಲಾ ಕಛೇರಿಯ ದೂರವಾಣಿ ಸಂಖ್ಯೆಗಳನ್ನು ವೆಬ್‌ಸೈಟ್‌ನಲ್ಲಿ ನೀಡಲಾಗಿರುತ್ತದೆ. ಆನ್‌ಲೈನ್ ಮೂಲಕ ಭರ್ತಿ ಮಾಡಿದ ಅರ್ಜಿಗಳನ್ನು ಅಗತ್ಯ/ದಾಖಲೆಗಳೊಂದಿಗೆ **ದಿನಾಂಕ: 14-07-2022 ರಿಂದ ದಿನಾಂಕ: 29-08-2022ರೊಳಗೆ** ಸಲ್ಲಿಸಲು ಅವಕಾಶವಿರುತ್ತದೆ.

**ಸೂಚನೆ: ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಯಾವುದೇ ಶುಲ್ಕ ಪಾವತಿಸುವಂತಿಲ್ಲ. ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾ ವ್ಯವಸ್ಥಾಪಕರ ಕಛೇರಿ, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಕಛೇರಿಯ ಅವಧಿಯಲ್ಲಿ ಉಚಿತವಾಗಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ವ್ಯವಸ್ಥೆ ಇರುತ್ತದೆ.**

(ವಿ.ರವಿ)

ವ್ಯವಸ್ಥಾಪಕ ನಿರ್ದೇಶಕರು.